**3** ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ**.,**ರವರ ನ್ಯಾಯಾಲಯ**,** ಕಡೂರು
<u>ಸಿ.ಸಿ.ನಂ**. 1138/2025**</u>

ದಿನಾಂಕಃ **22.06.2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು**.**

| | | |
|---|---|---|
| ಸಾಕ್ಷಿಯ ಹೆಸರು | ಪ್ರಸನ್ನ ಕೆ ಬಿ | ಚಾಸಾ-6, ಪ್ರಾಸ-7 |
| ತಂದೆಯ  ಹೆಸರು | ಬಸವರಾಜಪ್ಪ | |
| ವಯಸ್ಸು | 49  ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸ | ಕೊರಟಿಗೆರೆ | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

ಚಾಸಾ-5 ಮತ್ತು 2 ನೇ ಆರೋಪಿ  ನನಗೆ ಗೊತ್ತು. ಸಾಕ್ಷಿಗೆ ನಿಪಿ-32 ರ ನೋಟಿಸನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-32(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ-27 ರ ಟ್ರಾಕ್ಟರ್ ಅಮಾನತ್ ಮಹಜರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು  ನಿಪಿ-27(ಸಿ) ಎಂದು ಗುರುತಿಸಲಾಯಿತು. ನಿಪಿ-28 ಮತ್ತು 29 ರ ಛಾಯಾಚಿತ್ರಗಳಲ್ಲಿ ಸಾಕ್ಷಿ ತನ್ನ ಇರುವಿಕೆ ನೋಡಿ ಗುರುತಿಸಿರುತ್ತಾರೆ. ನಿಪಿ-32 ಮತ್ತು 27 ರಲ್ಲಿರುವ ಸಹಿಗಳನ್ನು ಎಲ್ಲಿ ಮತ್ತು ಯಾವ ವಿಚಾರಕ್ಕೆ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿಪಿ-28 ಮತ್ತು 29 ರ ಛಾಯಾಚಿತ್ರಗಳನ್ನು ಎಲ್ಲಿ ಮತ್ತು ಯಾವ ವಿಚಾರಕ್ಕೆ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮಹಜರ್ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ  ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು  ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ**,** ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

<u>ಪಾಟೀಸವಾಲುಃ ಮಾನ್ಯ ಸಸಅ**.** ರವರಿಂದ ಃ</u>

ದಿಃ 28.10.2024 ರಂದು ಆಕಾಶ್ ರವರಿಗೆ ಅಪಘಾತವಾಗಿರುವ ವಿಚಾರವಾಗಿ ಅಪಘಾತಪಡಿಸಿದ ವಾಹನವಾದ ಕೆಎ-66 ಟಿ-2201 ಟ್ರಾಕ್ಟರನ್ನು ಅಮಾನತ್ತುಪಡಿಸಿಕೊಳ್ಳುವ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ನಿಪಿ-32 ರಂತೆ ನನಗೆ ಮತ್ತು ಚಾಸಾ-5 ರವರಿಗೆ ಪೋಲಿಸರು ನೋಟಿಸು ನೀಡಿರುತ್ತಾರೆ ಎಂದರೆ ಸರಿಯಲ್ಲ. ಮಧ್ಯಾಹ್ನ 12.45 ರಿಂದ 1.15 ರವರೆಗೆ 2 ನೇ ಆರೋಪಿ ತೋರಿಸಿದ ಮೇರೆಗೆ

ನಿಪಿ-27 ರಂತೆ ನನ್ನ ಮತ್ತು ಚಾಸಾ-5 ರವರ ಸಮಕ್ಷಮ ಮಹಜರ್ ಕ್ರಮ ಜರುಗಿಸಿ ಮುಂದಿನ ಕ್ರಮಕ್ಕಾಗಿ ಟ್ರಾಕ್ಟರ್ ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ-27 ಮತ್ತು 28 ರಂತೆ ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.